ಸ್ವಚ್ಛ ಭಾರತ
ಒಂದು ಹೆಜ್ಜೆ ಸ್ವಚ್ಛತೆ ಕಡೆ

ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳು ಹಾಗೂ ಅಧ್ಯಕ್ಷರು ಸಮಾಜ ಕಲ್ಯಾಣ ಇಲಾಖೆ ಗ್ರೂಪ್ 'ಡಿ' ವೃಂದದ ನೇರನೇಮಕಾತಿ ಸಮಿತಿ, ಕೊಪ್ಪಳ

ಸಂಖ್ಯೆ:ಉನಿಸಕಇಕೊ: ಸಿಬ್ಬಂದಿ :ಸಿಆರ್. :2016-17 ದಿನಾಂಕ: 11-08-2017

## -:: ಪ್ರಕಟಣೆ ::-

ಸಮಾಜ ಕಲ್ಯಾಣ ಇಲಾಖೆಯಲ್ಲಿನ ಗ್ರೂಪ್ ಡಿ ವೃಂದದ ನೇರ ನೇಮಕಾತಿಗಾಗಿ ಹೈದ್ರಾಬಾದ್-ಕರ್ನಾಟಕ ವೃಂದದ ಮತ್ತು ಹೈದ್ರಾಬಾದ್-ಕರ್ನಾಟಕ ಉಳಿಕೆ ವೃಂದದ ಅಡುಗೆ ಸಹಾಯಕರ ಮತ್ತು ಕಾವಲುಗಾರರ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಜಿಲ್ಲಾ ವೆಬ್‌ಸೈಟ್‌ಗೆ ಈಗಾಗಲೇ ಪ್ರಕಟಿಸಿದ್ದು ಸರ್ಕಾರದ ಜಂಟಿ ಕಾರ್ಯದರ್ಶಿಗಳು ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು ರವರು ತಾತ್ಕಾಲಿಕ ಆಯ್ಕೆ ಪಟ್ಟಿಯಲ್ಲಿನ ಅಭ್ಯರ್ಥಿಗಳ ಮೂಲ ದಾಖಲೆಗಳ ಪರಿಶೀಲನೆಗಾಗಿ ದಿನಾಂಕ:21.08.2017 ರಂದು ಅಪರಾಹ್ನ 3.00 ರಿಂದ 5.30 ಘಂಟೆಯ ವರೆಗೆ ಸಮಯ ನಿಗಧಿಪಡಿಸಿ ಆದೇಶಿಸಿರುತ್ತಾರೆ ಅದರನ್ವಯ ಮೆಟ್ರಿಕ್ ಪೂರ್ವ ಬಾಲಕರ ವಸತಿ ನಿಲಯ, ಎಸ್.ಪಿ, ಆಫೀಸ್ ಎದುರುಗಡೆ ಕೊಪ್ಪಳ ಇಲ್ಲಿ ಪರಿಶೀಲನೆ ನಡೆಸಲಾಗುತ್ತದೆ. ಸದರಿ ದಿನದಂದು ತಪ್ಪದೇ ಈ ಕೆಳಕಂಡ ದಾಖಲಾತಿಗಳೊಂದಿಗೆ ಹಾಜರಾಗಲು ತಿಳಿಯಪಡಿಸಿದೆ.

1. ದಾಖಲಾತಿ ಪರಿಶೀಲನೆ ಹಾಜರಾತಿ ಸೂಚನಾ ಪತ್ರ.
2. ಆನ್-ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ.
3. ಎಸ್.ಎಸ್.ಎಲ್.ಸಿ ಅಂಕಪಟ್ಟಿ KSEEB/CBSC/ICSE ವಿದ್ಯಾರ್ಹತೆಯ ಅಂಕಪಟ್ಟಿ.
4. ಜನ್ಮ ದಿನಾಂಕವನ್ನು ನಮೂದಿಸಿರುವ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯ ಪ್ರಮಾಣ ಪತ್ರ/ವರ್ಗಾವಣೆಯ ಪ್ರಮಾಣ ಪತ್ರ (ಟಿ.ಸಿ)/ಜನ್ಮ ದಿನಾಂಕವನ್ನು ತೋರಿಸುವಂತಹ ದಾಖಲೆಯ ಉದ್ಧೃತ ಭಾಗ.
5. ಮೀಸಲಾತಿ ಸೌಲಭ್ಯ ಕೋರಿದ್ದಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ 'ಡಿ' ರಲ್ಲಿ ಪ್ರವರ್ಗ-1ರ (ಅ-1) ಅಭ್ಯರ್ಥಿಗಳು ನಮೂನೆ-'ಇ' ರಲ್ಲಿ, ಪ್ರವರ್ಗ 2A, 2B, 3A, 3B ಅಭ್ಯರ್ಥಿಗಳು ನಮೂನೆ 'ಎಫ್' ರಲ್ಲಿ ತಹಶೀಲ್ದಾರ್ ರಿಂದ ಪಡೆದಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
6. ಗ್ರಾಮೀಣ ಮೀಸಲಾತಿಗೆ ಸಂಬಂಧಿಸಿದಂತೆ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳು ನಮೂನೆ-2 ರಲ್ಲಿ (ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದು ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ರುಜು ಪಡೆದಿರಬೇಕು) ಹಾಗೂ ಸಾಮಾನ್ಯ ವರ್ಗದ ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳು ನಮೂನೆ-2ರ ಪ್ರಮಾಣ ಪತ್ರದ ಜೊತೆಗೆ ನಮೂನೆ-1ರಲ್ಲಿ ತಹಶೀಲ್ದಾರ್ ರಿಂದ ಮೇಲುಸ್ತರಕ್ಕೆ ಸೇರಿಲ್ಲದಿರುವ ಬಗ್ಗೆ ಪಡೆದ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ)
7. ಸೈನಿಕ ಸೇವೆಯಿಂದ ಬಿಡುಗಡೆಯಾದ/ಮುಕ್ತಿಹೊಂದಿದ ಬಗೆಗಿನ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
8. ಸೇವೆಯಲ್ಲಿರುವ ಅಭ್ಯರ್ಥಿಗಳು ಸಂಬಂಧಿತ ನೇಮಕಾತಿ ಆಯ್ಕೆ ಪ್ರಾಧಿಕಾರದಿಂದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದ ನಿರಾಪೇಕ್ಷಣಾ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
9. ಹೈದ್ರಾಬಾದ್-ಕರ್ನಾಟಕ ಪ್ರದೇಶದ ಅಭ್ಯರ್ಥಿಗಳ ಮೀಸಲಾತಿ ಕೋರಿರುವ ಅಭ್ಯರ್ಥಿಗಳು ಸರ್ಕಾರದ ಅಧಿಸೂಚನೆ ಸಂ:I & II ಆದೇಶ ಸಂಖ್ಯೆ DPAR 43/HKC/2013 ದಿ: 29.01.2014 ರಂತೆ ಸಕ್ಷಮ ಪ್ರಾಧಿಕಾರ ನೀಡಿದ ಅರ್ಹತಾ ಪ್ರಮಾಣ ಪತ್ರ ಅನುಬಂಧ-ಎ (ಅನುಚ್ಛೇಧ-371 (ಜೆ) ಮೇರೆಗೆ (3)(3) ನೇ ನಿಯಮದಂತೆ) (ಅನ್ವಯಿಸುವವರಿಗೆ ಮಾತ್ರ).
10. ಶಾಲೆಯ ಮುಖ್ಯೋಪಾಧ್ಯಯರಿಂದ ಪಡೆದ ಕ್ಷೇತ್ರ ಶಿಕ್ಷಣಾಧಿಕಾರಿಗಳಿಂದ ರುಜು ಪಡೆದಿರುವ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ ಪ್ರಮಾಣ ಪತ್ರ (1ನೇ ತರಗತಿಯಿಂದ 10ನೇ ತರಗತಿಯವರೆಗೆ).
11. ಸಕ್ಷಮ ಪ್ರಾಧಿಕಾರದಿಂದ ಪಡೆದ ಯೋಜನಾ ನಿರಾಶ್ರಿತರ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
12. ಶೇ.40 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಅಭ್ಯರ್ಥಿಗಳು ಜಿಲ್ಲಾ ಮಟ್ಟದ ವೈದ್ಯಕೀಯ ಮಂಡಳಿಯಿಂದ ನಿಗಧಿತ ನಮೂನೆಯಲ್ಲಿ ಪಡೆದ ಅಂಗವಿಕಲ ಪ್ರಮಾಣ ಪತ್ರ (ಅನ್ವಯಿಸುವವರಿಗೆ ಮಾತ್ರ).
13. ಅಂಗವಿಕಲರ ಮೀಸಲಾತಿ ಪಡೆಯಲಿಚ್ಛಿಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ ಹಾಜರು ಪಡಿಸುವುದು (ಅರ್ಜಿ ಸಲ್ಲಿಸುವ ಪೂರ್ವದಲ್ಲಿ ಪಡೆದಿರುವ ಪ್ರಮಾಣ ಪತ್ರ)
14. ಯೋಜನಾ ನಿರಾಶ್ರಿತ ಅಭ್ಯರ್ಥಿಗಳು, ವಿಧವೆಯರು, ಜೀತ ಕಾರ್ಮಿಕರು ಇವರುಗಳು ಸಕ್ಷಮ ಪ್ರಾಧಿಕಾರಿಂದ ಪಡೆದ ಪ್ರಮಾಣ ಪತ್ರ. (ಅನ್ವಯಿಸುವವರಿಗೆ ಮಾತ್ರ).
15. ಅಭ್ಯರ್ಥಿಯು Voter ID/Passport/DL/Pan Card/Bank Passbook/Adhar card etc ಇವುಗಳಲ್ಲಿ ಯಾವುದಾದರೂ ಒಂದು ಗುರುತಿನ ಚೀಟಿ ತರುವುದು
16. ಅಡುಗೆ ತಯಾರಿಕೆಯ ಬಗ್ಗೆ 3 ವರ್ಷ ಅನುಭವವಿರುವ ಬಗ್ಗೆ ಆನ್-ಲೈನ್ ಅರ್ಜಿಯಲ್ಲಿ ನಮೂದಿಸಿದಂತೆ ಸಂಬಂಧಪಟ್ಟ ಸಂಸ್ಥೆಯಿಂದ ಪಡೆದಿರುವ ದೃಢೀಕರಣ ಪತ್ರ ಹಾಜರಿ ಪಡಿಸುವುದು. (Any Reputed/Recognized Organisation **ಅಥವಾ** Cerficate in Cooking from Recognized institution) ಅನುಭವ ಪ್ರಮಾಣ ಪತ್ರ ನೀಡಿದ ಸಂಸ್ಥೆಯು ಸಂಬಂಧಿಸಿದ ಪ್ರಾಧಿಕಾರದಿಂದ ಪಡೆದ ಪರವಾನಿಗೆ ಪತ್ರ ಹಾಗೂ ಸಂಸ್ಥೆಯು ನವೀಕರಣಗೊಂಡ ನವೀಕರಣ ಪತ್ರದ ದೃಢೀಕೃತ ಪ್ರತಿ

ಜಿಲ್ಲಾಧಿಕಾರಿಗಳು
ಹಾಗೂ ಅಧ್ಯಕ್ಷರು ಸಮಾಜ ಕಲ್ಯಾಣ ಇಲಾಖೆಯ
ಗ್ರೂಪ್ 'ಡಿ' ವೃಂದದ ನೇರನೇಮಕಾತಿ ಸಮಿತಿ,
ಕೊಪ್ಪಳ

E: 2015-16/ M.M/Sibbandi Mahiti/ Group D requipment/ Letters